# ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 118 ಪಸಸೇ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:10.12.2019

## ಅಧಿಸೂಚನೆ

ಕರ್ನಾಟಕರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (2) ನೇ ಉಪ-ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಕರ್ನಾಟಕ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವೆಗಳು(ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳಲ್ಲಿನ ಪಶು ವೈದ್ಯಾಧಿಕಾರಿಗಳ ನೇಮಕಾತಿ) (ವಿಶೇಷ) ನಿಯಮಗಳು, 2019ರ ಕರಡನ್ನು, ದಿನಾಂಕ: 06ನೇ ನವೆಂಬರ್ 2019ರಂದು ಹೊರಡಿಸಿ, ಕರ್ನಾಟಕ ರಾಜ್ಯ ಪತ್ರ ಭಾಗ-4 ಎ ಸಂ. (440) 2979ರಲ್ಲಿ ಅಧಿಸೂಚನೆ ಸಂಖ್ಯೆ: ಎಹೆಚ್‌ಎಫ್118 ವಿಎಹೆಚ್ 2018, ದಿನಾಂಕ: 07ನೇ ನವೆಂಬರ್ 2019ರಲ್ಲಿ ಪ್ರಕಟಿಸಲಾಗಿದ್ದು, ಅದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ, ಅದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ/ ಸಲಹೆಗಳನ್ನು ಆಹ್ವಾನಿಸಲಾಗಿತ್ತು.

ಸದರಿ ರಾಜ್ಯಪತ್ರವನ್ನು ದಿನಾಂಕ: 07ನೇ ನವೆಂಬರ್ 2019ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗಿತ್ತು.

ಆದರೆ, ಸದರಿ ಪ್ರಕಟಣೆಗಳಿಗೆದುರಾಗಿ ಯಾವುದೇ ಆಕ್ಷೇಪಣೆ ಮತ್ತು ಸೂಚನೆಗಳು ರಾಜ್ಯ ಸರ್ಕಾರದಿಂದ ಸ್ವೀಕೃತಗೊಂಡಿರುವುದಿಲ್ಲ.

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990 ರಕರ್ನಾಟಕಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (1) ನೇ ಉಪ-ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಮುಂದಿನ ನಿಯಮಗಳನ್ನು ರಚಿಸಿದೆ. ಎಂದರೆ:-

## <u>ನಿಯಮಗಳು</u>

1. **<u>ಶೀರ್ಷಿಕೆ, ಪ್ರಾರಂಭ ಮತ್ತು ಅನ್ವಯ.–</u>** (1) ಈ ನಿಯಮಗಳನ್ನು ಕರ್ನಾಟಕ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವೆಗಳು (ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳಲ್ಲಿನ ಪಶು ವೈದ್ಯಾಧಿಕಾರಿಗಳ ನೇಮಕಾತಿ) (ವಿಶೇಷ) ನಿಯಮಗಳು, 2019 ಎಂದು ಕರೆಯತಕ್ಕದ್ದು.

(2) ಅವು, ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಅಂತಿಮ ಪ್ರಕಟಣೆಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

(3) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಅಥವಾ ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಆಯ್ಕೆಯ ಮೂಲಕ ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2006 ಅಥವಾ ಕರ್ನಾಟಕ ಪಶುಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ (ನೇಮಕಾತಿ) ನಿಯಮಗಳು, 1965 ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ ಮೇರೆಗೆ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ ಹುದ್ದೆಗಳ ಪ್ರವರ್ಗಗಳಿಗೆ ಸಂಬಂಧಿಸಿದಂತೆ ರಚಿಸಲಾದ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ ಯಾವುದೇ ಇತರ ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಈ ನಿಯಮಗಳ ಉಪಬಂಧಗಳು, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಯಲ್ಲಿ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳಲ್ಲಿರುವ ಪಶು ವೈದ್ಯಾಧಿಕಾರಿ ಹುದ್ದೆಗಳ ಪ್ರವರ್ಗಗಳಲ್ಲಿ ಖಾಲಿ ಇರುವ 61 ಹುದ್ದೆಗಳ ನೇರ ನೇಮಕಾತಿಗೆ ಅನ್ವಯವಾಗತಕ್ಕದ್ದು.

ಪರಂತು, ಈ ನಿಯಮಗಳಲ್ಲಿರುವುದು ಯಾವುದೂ, ಒಂದಕ್ಕಿಂತ ಹೆಚ್ಚಿನ ನೇಮಕಾತಿಗೆ ಅನ್ವಯವಾಗತಕ್ಕದ್ದಲ್ಲ.

2. **<u>ಪರಿಭಾಷೆಗಳು.–</u>** (1) ಈ ನಿಯಮಗಳಲ್ಲಿ ಸಂದರ್ಭವು, ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) “ನೇಮಕಾತಿ ಪ್ರಾಧಿಕಾರ” ಎಂದರೆ, ಈ ನಿಯಮಗಳ ಮೇರೆಗೆ ಪಶು ವೈದ್ಯಾಧಿಕಾರಿಗಳನ್ನು ನೇಮಕ ಮಾಡುವ ರಾಜ್ಯ ಸರ್ಕಾರ;

(ಬಿ) “ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳು” ಎಂದರೆ, ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾದ ಪಶು ವೈದ್ಯಾಧಿಕಾರಿಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶದ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಮೇರೆಗೆ ರಚಿಸಲಾದ ಸ್ಥಳೀಯ ವೃಂದ;

(ಸಿ) “ಅರ್ಹತಾ ಪರೀಕ್ಷೆ” ಎಂದರೆ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಪಶು ವೈದ್ಯಾಧಿಕಾರಿಗಳು ಹುದ್ದೆಗಳ ನೇಮಕಾತಿಗಾಗಿ ನಿರ್ದಿಷ್ಟಪಡಿಸಿರುವ ಕನಿಷ್ಠ ವಿದ್ಯಾರ್ಹತೆ; ಮತ್ತು

(ಡಿ) “ಅನುಸೂಚಿ” ಎಂದರೆ, ಈ ನಿಯಮಗಳಿಗೆ ಅನುಬಂಧಿಸಿದ ಅನುಸೂಚಿ;

(ಇ) “ಆಯ್ಕೆ ಸಮಿತಿ” ಎಂದರೆ, 3ನೇ ನಿಯಮದ ಮೇರೆಗೆ ರಚಿಸಲಾದ ರಾಜ್ಯಮಟ್ಟದ ಆಯ್ಕೆ ಸಮಿತಿ;

(ಎಫ್)“ಖಾಲಿ ಹುದ್ದೆಗಳು” ಎಂದರೆ, ಈ ನಿಯಮಗಳ ಮೇರೆಗೆ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳ ಸಂಖ್ಯೆ.

(2) ಈ ನಿಯಮಗಳಲ್ಲಿ ಬಳಸಲಾಗಿರುವ ಆದರೆ ಪರಿಭಾಷಿಸಿಲ್ಲದ ಇತರೆ ಪದಗಳು ಮತ್ತು ವ್ಯಾಖ್ಯಾನಗಳು ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ಅವುಗಳಿಗೆ ಕೊಟ್ಟಿರುವ ಅರ್ಥವನ್ನೇ ಹೊಂದಿರತಕ್ಕದ್ದು.

3. **ಆಯ್ಕೆ ಸಮಿತಿ**.- ಈ ನಿಯಮಗಳ ಮೇರೆಗೆ ಪಶು ವೈದ್ಯಾಧಿಕಾರಿಗಳ ಹುದ್ದೆಗಳ ಪ್ರವರ್ಗಗಳ ನೇಮಕಾತಿಗಾಗಿ ಈ ಮುಂದಿನ ಸದಸ್ಯರುಗಳ ಒಂದು ಆಯ್ಕೆ ಸಮಿತಿಯನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (1) | ಆಯುಕ್ತರು,<br><br>ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | : ಅಧ್ಯಕ್ಷರು |
| (2) | ನಿರ್ದೇಶಕರು, | : ಸದಸ್ಯರು |

| | | |
|---|---|---|
| | ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | |
| (3) | ಆಯುಕ್ತರು,<br><br>ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಜಂಟಿ ನಿರ್ದೇಶಕರ ದರ್ಜೆಗಿಂತ ಕಡಿಮೆಯಿರದ ದರ್ಜೆಯ ಅವರ ಪ್ರತಿನಿಧಿಗಳು | : ಸದಸ್ಯರು |
| (4) | ನಿರ್ದೇಶಕರು,<br><br>ಬುಡಕಟ್ಟು ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (5) | ನಿರ್ದೇಶಕರು,<br><br>ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (6) | ನಿರ್ದೇಶಕರು,<br><br>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (7) | ನಿರ್ದೇಶಕರು,<br><br>ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಂಗಳೂರು ಅಥವಾ ಅವರ ಪ್ರತಿನಿಧಿ | : ಸದಸ್ಯರು |
| (8) | ಜಂಟಿ ನಿರ್ದೇಶಕರು (ಆಡಳಿತ)<br><br>ಆಯುಕ್ತಾಲಯ ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು | : ಸದಸ್ಯ ಕಾರ್ಯದರ್ಶಿ |

**4.** **ಅರ್ಜಿಗಳನ್ನು ಆಹ್ವಾನಿಸುವುದು**.–ಆಯ್ಕೆ ಸಮಿತಿಯು, ಈ ನಿಯಮಗಳ ಮೇರೆಗೆ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಪರಿಗಣನೆಗೆ ತೆಗೆದುಕೊಂಡ ತರುವಾಯ, ಅರ್ಹ ಷರತ್ತುಗಳು, ಆಯ್ಕೆಯ ಸ್ವರೂಪ, ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳ ಸಂಖ್ಯೆ ಹಾಗೂ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನು ಅಥವಾ ಯಾವುದೇ ಆದೇಶದ ಮೂಲಕ ಅಥವಾ ಅದರ ಮೇರೆಗೆ ಒದಗಿಸಲಾದ ಹುದ್ದೆಗಳ ಮೀಸಲಾತಿಗೆ ಅನುಸಾರವಾಗಿರುವ ವರ್ಗೀಕರಣವನ್ನು ನಿರ್ದಿಷ್ಟಪಡಿಸಿ ಅಧಿಕೃತ ರಾಜ್ಯಪತ್ರದಲ್ಲಿ ಖಾಲಿ

ಹುದ್ದೆಗಳನ್ನು ಜಾಹೀರಾತುಪಡಿಸಿ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಂಥ ಜಾಹೀರಾತಿನ ಸಾರಂಶವನ್ನು ರಾಜ್ಯದಲ್ಲಿ ವ್ಯಾಪಕ ಪ್ರಚಾರವನ್ನು ಹೊಂದಿರುವ ಒಂದಕ್ಕಿಂತ ಹೆಚ್ಚಿನ ದಿನಪತ್ರಿಕೆಗಳಲ್ಲಿ ಅಧಿಸೂಚಿಸಬೇಕು. ಅದರಲ್ಲಿ ಒಂದು ಕನ್ನಡ ದಿನಪತ್ರಿಕೆಯಲ್ಲಿ ಪ್ರಕಟಿಸತಕ್ಕದ್ದು.

**5. ಕನ್ನಡ ಭಾಷಾಜ್ಞಾನ.**–ಅಭ್ಯರ್ಥಿಯು, ಗರಿಷ್ಠ 150 ಅಂಕಗಳ ಒಂದು ಪತ್ರಿಕೆಯನ್ನು ಒಳಗೊಂಡಿರುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅವನು ಅರ್ಹನಾಗಿದ್ದ ಹೊರತು ಹಾಗೂ ಕನ್ನಡ ಭಾಷಾಜ್ಞಾನಕ್ಕೆ ಸಂಬಂಧಿಸಿದಂತೆ ಸದರಿ ಅರ್ಹತಾ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಪಡೆದಿದ್ದ ಹೊರತು ಪಶು ವೈದ್ಯಾಧಿಕಾರಿಗಳ ಹುದ್ದೆಗೆ ಆಯ್ಕೆ ಪಟ್ಟಿಯಲ್ಲಿ ಅವನ ಹೆಸರನ್ನು ಸೇರಿಸಲು ಅರ್ಹನಾಗತಕ್ಕದ್ದಲ್ಲ. ಈ ಪತ್ರಿಕೆಯ ಗುಣಮಟ್ಟವು, ಎಸ್‌ಎಸ್‌ಎಲ್‌ಸಿ ಮಟ್ಟದ ಕನ್ನಡ ಪ್ರಥಮ ಭಾಷೆಯದ್ದಾಗಿರತಕ್ಕದ್ದು.

ಪರಂತು, ಸಮಿತಿಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಥವಾ ಯಾವುದೇ ತತ್ಸಮಾನ ಪರೀಕ್ಷೆಯಲ್ಲಿ ಅಥವಾ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಅದರಲ್ಲಿ ಒಂದು ವಿಷಯ ಸಂಯುಕ್ತ ಪತ್ರಿಕೆಯಾಗಿರಬಾರದು) ತೆಗೆದುಕೊಂಡು ಉತ್ತೀರ್ಣನಾಗಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿದ್ದರೆ ಅಥವಾ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಈ ಮೊದಲೇ ಉತ್ತೀರ್ಣನಾಗಿದ್ದಲ್ಲಿ ಆ ಅಭ್ಯರ್ಥಿಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದರಿಂದ ವಿನಾಯಿತಿ ನೀಡಬಹುದು.

**6. ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವುದು.–** (1) ಆಯ್ಕೆ ಸಮಿತಿಯು, ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾಗಿರುವ ಅಭ್ಯರ್ಥಿಗಳ ಪೈಕಿಯಿಂದ, ಅರ್ಹತಾ ಪರೀಕ್ಷೆಯಲ್ಲಿ ಗಳಿಸಲಾದ ಅಂಕಗಳ ಒಟ್ಟು ಶೇಕಡಾವಾರು ಹಾಗೂ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನು ಅಥವಾ ಯಾವುದೇ ಆದೇಶದ ಮೂಲಕ ಅಥವಾ ಅದರ ಮೇರೆಗೆ ಉಪಬಂಧಿಸಿದ ಹುದ್ದೆಗಳ ಮೀಸಲಾತಿಯ ಎಲ್ಲಾ ಹಂತದ (Vertical) ಮತ್ತು ಒಂದೇ ಹಂತದ (Horizontal) ಆಧಾರದ

ಮೇಲೆ ಈ ನಿಯಮಗಳ ಮೇರೆಗೆ ನೇಮಕಾತಿಗಾಗಿ ಅರ್ಹತಾ ಕ್ರಮದಲ್ಲಿ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸತಕ್ಕದ್ದು.

(2) (1)ನೇ ಉಪ-ನಿಯಮದ ಮೇರೆಗೆ ಆಯ್ಕೆ ಮಾಡಬಹುದಾದ ಅಭ್ಯರ್ಥಿಗಳ ಸಂಖ್ಯೆಯು ಅಧಿಸೂಚಿಸಿರುವ ಖಾಲಿ ಹುದ್ದೆಗಳ ಸಂಖ್ಯೆಗೆ ಸಮನಾಗಿರತಕ್ಕದ್ದು.

(3) ಇಬ್ಬರು ಅಥವಾ ಇಬ್ಬರಿಗಿಂತ ಹೆಚ್ಚಿನ ಅಭ್ಯರ್ಥಿಗಳು ಸಮಾನ ಅಂಕಗಳನ್ನು ಪಡೆದುಕೊಂಡಿದ್ದರೆ, ಅಂಥ ಅಭ್ಯರ್ಥಿಗಳ ಸಂಬಂಧದಲ್ಲಿ ಅವರ ವಯಸ್ಸಿನ ಆಧಾರದ ಮೇಲೆ, ಹಿರಿಯ ವಯಸ್ಸಿನವನನ್ನು, ಕಿರಿಯ ವಯಸ್ಸಿನವನಿಗಿಂತ ಮೇಲಿನ ಸ್ಥಾನಕ್ಕೆ ಅರ್ಹತಾ ಕ್ರಮದಲ್ಲಿ ನಿಗದಿಪಡಿಸತಕ್ಕದ್ದು. ಅಂಥ ಅರ್ಹ ಅಭ್ಯರ್ಥಿಗಳ ಪಟ್ಟಿಯಲ್ಲಿ ಸೇರಿಸಬಹುದಾದ ಅಭ್ಯರ್ಥಿಗಳ ಸಂಖ್ಯೆಯು, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಖಾಲಿ ಹುದ್ದೆಗಳ ಸಂಖ್ಯೆಗೆ ಸಮನಾಗಿರತಕ್ಕದ್ದು.

(4) ಆಯ್ಕೆ ಸಮಿತಿಯು, (1)ನೇ ಉಪ-ನಿಯಮದ ಮೇರೆಗೆ ಸಿದ್ಧಪಡಿಸಿರುವ ಮುಖ್ಯ ಪಟ್ಟಿಯಲ್ಲಿ ಒಳಗೊಳ್ಳದಿರುವಂಥ ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಯನ್ನು ಸಿದ್ಧಪಡಿಸತಕ್ಕದ್ದು. ಹೆಚ್ಚುವರಿ ಪಟ್ಟಿಯಲ್ಲಿ ಸೇರಿಸಬೇಕಾದ ಅಭ್ಯರ್ಥಿಗಳ ಸಂಖ್ಯೆಯು, (1)ನೇ ಉಪ-ನಿಯಮದ ಮೇರೆಗೆ ಸಿದ್ಧಪಡಿಸಿರುವ ಪಟ್ಟಿಯಲ್ಲಿ [ಒಂದೇ ಹಂತದ (Horizontal) ಮತ್ತು ಎಲ್ಲಾ ಹಂತದ (Vertical)] ಪ್ರತಿಯೊಂದು ಮೀಸಲು ಪ್ರವರ್ಗಗಳಲ್ಲಿನ ಅಭ್ಯರ್ಥಿಗಳ ಸಂಖ್ಯೆಯಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಶೇಕಡಾ 20 ರಷ್ಟಿರತಕ್ಕದ್ದು. (1)ನೇ ಉಪ-ನಿಯಮದ ಮೇರೆಗೆ ಹೆಚ್ಚುವರಿ ಪಟ್ಟಿಯಲ್ಲಿ ಪ್ರತಿಯೊಂದು ಮೀಸಲಾತಿ ಪ್ರವರ್ಗ [ಒಂದೇ ಹಂತದ(Horizontal) ಮತ್ತು ಎಲ್ಲಾ ಹಂತದ(Vertical)] ಗಳಿಗೆ ಸೇರಿದ ಕನಿಷ್ಠ ಪಕ್ಷ ಒಬ್ಬ ಅಭ್ಯರ್ಥಿಯು ಇರತಕ್ಕದ್ದು. (1)ನೇ ಉಪ-ನಿಯಮದ ಮೇರೆಗೆ ಪಟ್ಟಿಯಲ್ಲಿ ಹೆಸರನ್ನು ಸೇರಿಸಿರುವ ಅಭ್ಯರ್ಥಿಯು ಗೊತ್ತುಪಡಿಸಿರುವ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ವಿಫಲನಾದಲ್ಲಿ, ಕರ್ತವ್ಯಕ್ಕೆ ವರದಿಯನ್ನು ಮಾಡಿಕೊಳ್ಳಲು ವಿಫಲನಾದ ಅಭ್ಯರ್ಥಿಯ ಸ್ಥಾನಕ್ಕೆ ಹೆಚ್ಚುವರಿ ಪಟ್ಟಿಯಲ್ಲಿರುವ ಅದೇ ಮೀಸಲಾತಿ ಪ್ರವರ್ಗಕ್ಕೆ ಸೇರಿದ ಅಭ್ಯರ್ಥಿಯನ್ನು ನೇಮಕ ಮಾಡತಕ್ಕದ್ದು.

(5) (1) ಮತ್ತು (4)ನೇ ಉಪ-ನಿಯಮಗಳ ಮೇರೆಗೆ, ಹಾಗೆ ಸಿದ್ಧಪಡಿಸಿರುವ ಪಟ್ಟಿಗಳನ್ನು ಅಧಿಕೃತ ರಾಜ್ಯಪತ್ರದಲ್ಲಿ ಮತ್ತು ಆಯುಕ್ತರ ಕಚೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸತಕ್ಕದ್ದು.

(6) ವಿಶೇಷ ಆಯ್ಕೆ ಸಮಿತಿಯು ಆಯ್ಕೆ ಮಾಡಿದ ಹಾಗೂ ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸಲಾದ ಅಭ್ಯರ್ಥಿಗಳ ಪಟ್ಟಿಯು, ಎಲ್ಲಾ ಅಧಿಸೂಚಿತ ಖಾಲಿ ಸ್ಥಾನಗಳನ್ನು ಭರ್ತಿ ಮಾಡುವವರೆಗೆ ಅಥವಾ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ ಒಂದು ವರ್ಷ ಪೂರ್ಣಗೊಳ್ಳುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸಿಂಧುವಾಗಿರತಕ್ಕದ್ದು.

7. **ಅಭ್ಯರ್ಥಿಗಳ ನೇಮಕಾತಿ**.- (1) 6ನೇ ನಿಯಮದ ಮೇರೆಗೆ ಸಿದ್ಧಪಡಿಸಿರುವ ಆಯ್ಕೆ ಪಟ್ಟಿಯಲ್ಲಿ ಸೇರಿಸಿರುವ ಹೆಸರುಗಳ ಅಭ್ಯರ್ಥಿಗಳನ್ನು ನೇಮಕಾತಿ ಪ್ರಾಧಿಕಾರವು ತಾನು ಅವಶ್ಯಕವೆಂದು ಭಾವಿಸಬಹುದಾದಂಥ ವಿಚಾರಣೆಯನ್ನು ಮಾಡಿದ ತರುವಾಯ ನೇಮಕಾತಿಗೆ ಪ್ರತಿಯೊಬ್ಬ ಅಭ್ಯರ್ಥಿಯು ಎಲ್ಲಾ ರೀತಿಯಿಂದಲೂ ಸೂಕ್ತನಾಗಿರುವನೆಂದು ಮನದಟ್ಟಾದ ತರುವಾಯ, ಪಟ್ಟಿಯಲ್ಲಿ ಅವರ ಹೆಸರುಗಳು ಯಾವ ಕ್ರಮದಲ್ಲಿರುವುದೋ ಆ ಪ್ರಕಾರವೇ ಖಾಲಿ ಸ್ಥಾನಗಳಿಗೆ ನೇಮಕ ಮಾಡತಕ್ಕದ್ದು.

(2) 6ನೇ ನಿಯಮದ (5) ನೇ ಉಪ-ನಿಯಮದ ಮೇರೆಗೆ ಪ್ರಕಟಿಸಿರುವ ಪಟ್ಟಿಯಲ್ಲಿ ಹೆಸರಿರುವ ಅಭ್ಯರ್ಥಿಯು ನೇಮಕಾತಿಯ ಯಾವುದೇ ಹಕ್ಕನ್ನು ಚಲಾಯಿಸತಕ್ಕದ್ದಲ್ಲ.

8. **ಇತರ ನಿಯಮಗಳ ಅನ್ವಯ**.-ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977, ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957, ಕರ್ನಾಟಕ ನಡತೆ ನಿಯಮಗಳು, 1966, ಕರ್ನಾಟಕ ಸಿವಿಲ್ ಸೇವಾ (ಪ್ರೊಬೆಷನ್) ನಿಯಮಗಳು, 1977 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ ಮೇರೆಗೆ ಮಾಡಲಾದ ಅಥವಾ ಮಾಡಲಾಗಿದೆ ಎಂದು ಭಾವಿಸಲಾದ ಸರ್ಕಾರಿ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತುಗಳನ್ನು ನಿಯಂತ್ರಿಸುವ ತತ್ಕಾಲದಲ್ಲಿ ಜಾರಿಯಲ್ಲಿರುವ ಎಲ್ಲಾ ಇತರ ನಿಯಮಗಳು ಈ ನಿಯಮಗಳ ಉಪಬಂಧಗಳೊಂದಿಗೆ ಅಂಥ ನಿಯಮಗಳು

ಅಸಂಗತವಾಗಿಲ್ಲದಿರುವಷ್ಟರ ಮಟ್ಟಿಗೆ, ಈ ನಿಯಮಗಳ ಮೇರೆಗೆ ಮಾಡಲಾದ ಆಯ್ಕೆಗೆ ಹಾಗೂ ನೇಮಕಗೊಂಡ ವ್ಯಕ್ತಿಗಳಿಗೆ ಅನ್ವಯವಾಗತಕ್ಕದ್ದು.

**ಅನುಸೂಚಿ**

**(3ನೇ ನಿಯಮವನ್ನು ನೋಡಿ)**

| ಕ್ರ. ಸಂ. | ಹುದ್ದೆಯ ಪ್ರವರ್ಗ ಮತ್ತು ವೇತನ ಶ್ರೇಣಿ | ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ | ಕನಿಷ್ಠ ವಿದ್ಯಾರ್ಹತೆ |
|---|---|---|---|
| 1 | ಪಶುವೈದ್ಯಾಧಿಕಾರಿ (ರೂ. 52650-97100) | 61 (ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದಗಳು) | ಯಾವುದೇ ಪಶುವೈದ್ಯಕೀಯ ವಿಜ್ಞಾನ ವಿಶ್ವವಿದ್ಯಾಲಯದಿಂದ ಅಥವಾ ಭಾರತದಲ್ಲಿ ಕಾನೂನು ಮೂಲಕ ಸ್ಥಾಪಿಸಲಾದ ಪಶು ವಿಶ್ವವಿದ್ಯಾಲಯ ಅಥವಾ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದಿಂದ ಕನಿಷ್ಠ ಶೇಕಡಾ ಐವತ್ತರಷ್ಟು ಅಂಕಗಳೊಂದಿಗೆ ಬಿ.ವಿ.ಎಸ್.ಸಿ. ಮತ್ತು ಎ.ಹೆಚ್. ಪದವಿಯನ್ನು ಹೊಂದಿರಬೇಕು.<br><br>ಪಶುವೈದ್ಯಕೀಯ ಪರಿಷತ್ತು ಅಧಿನಿಯಮ, 1984ರ ಅನುಸಾರವಾಗಿ ಕರ್ನಾಟಕ ಪಶು ವೈದ್ಯಕೀಯ ಪರಿಷತ್ತಿನಲ್ಲಿ ಆತನ ಹೆಸರನ್ನು ನೋಂದಾಯಿಸಿರಬೇಕು. |

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಟಿ.ಹನುಮಂತೇಗೌಡ)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,**
**(ಪಶು ಸಂಗೋಪನೆ)**